# ಕುವೆಂಪು ವಿಶ್ವವಿದ್ಯಾಲಯ

ಸಂಖ್ಯೆ:ಕುವಿ/ದಾಖವಿ-3/ 2841 /2021-22

ವಿಶ್ವವಿದ್ಯಾಲಯ ಕಾರ್ಯಾಲಯ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577451
ದಿನಾಂಕ:27-10-2021

## ಸುತ್ತೋಲೆ

ವಿಷಯ: 2021ನೇ ಸಾಲಿನ "ಕರ್ನಾಟಕ ರಾಜ್ಯೋತ್ಸವ"ವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಕುರಿತು.

ಉಲ್ಲೇಖ:1. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)- ಇವರ ಆದೇಶ ಸಂಖ್ಯೆ:ಇಡಿ112:ವಿವಿಧ2021, ಬೆಂಗಳೂರು ದಿನಾಂಕ:26-10-2021.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:27-10-2021

***

"ಕರ್ನಾಟಕ ರಾಜ್ಯೋತ್ಸವ"ವನ್ನು ಪ್ರತಿ ವರ್ಷವೂ ನವೆಂಬರ್ ತಿಂಗಳಲ್ಲಿ ಆಚರಿಸುತ್ತಿರುವಂತೆಯೇ, 2021ನೇ ಸಾಲಿನ ವರ್ಷದಲ್ಲಿಯೂ ಸಹ "ಕನ್ನಡ ರಾಜ್ಯೋತ್ಸವ"ವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಕುರಿತು ಈ ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉಲ್ಲೇಖಿತ-1ರ ಆದೇಶದಲ್ಲಿ ಆದೇಶಿಸಿರುತ್ತಾರೆ.

ಉಲ್ಲೇಖಿತ ಸರ್ಕಾರದ ಆದೇಶದಂತೆ, ವಿಶ್ವವಿದ್ಯಾಲಯದ ಆವರಣ, ಸ್ನಾತಕೋತ್ತರ ಕೇಂದ್ರ, ಕಡೂರು / ಚಿಕ್ಕಮಗಳೂರು, ಘಟಕ / ನೇರ ಆಡಳಿತಕ್ಕೆ ಒಳಪಟ್ಟ ಕಾಲೇಜುಗಳಲ್ಲಿ ಕನ್ನಡದ ಶ್ರೇಷ್ಠತೆಯನ್ನು ಸಾರುವ **ಡಾ. ಕುವೆಂಪುರವರ "ಬಾರಿಸು ಕನ್ನಡ ಡಿಂಡಿಮವ, ಡಾ. ಕೆ.ಎಸ್. ನಿಸಾರ್ ಅಹಮದ್‌ರವರ "ಜೋಗದ ಸಿರಿ ಬೆಳಕಿನಲ್ಲಿ"ಹಾಗೂ ಹಂಸಲೇಖರವರ "ಹುಟ್ಟಿದರೆ ಕನ್ನಡ ನಾಡಿನಲ್ಲಿ ಹುಟ್ಟಬೇಕು"** ಈ ಗೀತೆಗಳನ್ನು **ಅಕ್ಟೋಬರ್-28ನೇ ತಾರೀಖು ಗುರುವಾರದಂದು ಬೆಳಗ್ಗೆ 11.00 ಘಂಟೆಗೆ ಪ್ರೊ. ಎಸ್.ಪಿ. ಹಿರೇಮಠ್ ಸಭಾಂಗಣದಲ್ಲಿ** ನಡೆಯಲಿರುವ ಸಾಮೂಹಿಕ ಗೀತ ಗಾಯನ ಕಾರ್ಯಕ್ರಮದಲ್ಲಿ ಎಲ್ಲಾ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ತಿಳಿಸಲಾಗಿದೆ.

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577451, ಶಿವಮೊಗ್ಗ ಜಿಲ್ಲೆ.

ಗೆ:

**ಪ್ರೊ. ಜಿ. ಪ್ರಶಾಂತ್ ನಾಯಕ, ನಿರ್ದೇಶಕರು, ಕನ್ನಡ ಭಾರತಿ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ,** ಶಂಕರಘಟ್ಟ - ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡುತ್ತಾ, ಕಾರ್ಯಕ್ರಮ ಆಯೋಜಿಸಿ, ಯಶಸ್ವಿಗೊಳಿಸಲು ಕೋರಿದೆ. (ಕಾರ್ಯಕ್ರಮ ವಿವರದ ಕರ್ನಾಟಕ ಸರ್ಕಾರದ ನಡಾವಳಿಗಳ ಆದೇಶ ಲಗತ್ತಿಸಿದೆ)

ಪ್ರತಿ:-

1. ಅಧ್ಯಕ್ಷರು / ಮುಖ್ಯಸ್ಥರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕಡೂರು / ಕುವೆಂಪು ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ ಐ.ಡಿ.ಎಸ್.ಜಿ. ಸರ್ಕಾರಿ ಕಾಲೇಜು ಆವರಣ, ಚಿಕ್ಕಮಗಳೂರು.
3. ಪ್ರಾಂಶುಪಾಲರು, ಸಹ್ಯಾದ್ರಿ ವಿಜ್ಞಾನ / ಕಲಾ / ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ.
4. ಪ್ರಾಂಶುಪಾಲರು, ವಿಶ್ವವಿದ್ಯಾಲಯದ ಶ್ರೀಮದ್ ರಂಭಾಪುರಿ ಕಲಾ ಮತ್ತು ವಾಣಿಜ್ಯ ಕಾಲೇಜು, ಶಂಕರಘಟ್ಟ
5. ಸಂಚಾಲಕರು:ಎಸ್.ಸಿ.ಎಸ್.ಟಿ.ಘಟಕ/ಒ.ಬಿ.ಸಿ.ಘಟಕ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6. ಶಿಕ್ಷಕ ಸಲಹೆಗಾರರು, ವಿದ್ಯಾರ್ಥಿನಿಲಯಗಳು, ಶಂಕರಘಟ್ಟ.
7. ಆಪ್ತ ಕಾರ್ಯಾಲಯ, ಕುಲಪತಿಗಳು/ ಕುಲಸಚಿವರು / ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8. ನಿರ್ದೇಶಕರು, ಯು.ಸಿ.ಸಿ.ಎಫ್. ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ - ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳುವುದು. [ಕರ್ನಾಟಕ ಸರ್ಕಾರದ ನಡಾವಳಿಗಳ ಆದೇಶ ಲಗತ್ತಿಸಿದೆ]
9. ಕಛೇರಿ ಪ್ರತಿ.

Scanned with CamScanner

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2021ನೇ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಅ.ಸ.ಪತ್ರ ಸಂಖ್ಯೆ: ಮುಕಾ/877/2021, ದಿನಾಂಕ: 22.10.2021.
2. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಅ.ಸ.ಪತ್ರ ಸಂಖ್ಯೆ: ಕಸಂಇ / 29/ ಸಕಾ/ ಅಕಾ/ ಆಶಾ / 2021, ದಿನಾಂಕ: 22.10.2021.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 22.10.2021ರ ಪತ್ರದಲ್ಲಿ, ಕರ್ನಾಟಕ ರಾಜ್ಯೋತ್ಸವವನ್ನು ಪ್ರತಿ ವರ್ಷವೂ ನವಂಬರ್ ತಿಂಗಳಲ್ಲಿ ಆಚರಿಸುತ್ತಿರುವಂತೆಯೇ, 2021ನೇ ಸಾಲಿನ ವರ್ಷದಲ್ಲಿಯೂ ಸಹ ಕನ್ನಡ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಕುರಿತು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕರ್ನಾಟಕ ರಾಜ್ಯೋತ್ಸವ ಆಚರಣೆಯ ಬಗ್ಗೆ ರೂಪು ರೇಷೆಗಳನ್ನು ಸಹ ನೀಡಿರುತ್ತದೆ. ಇದರಲ್ಲಿ ನಾಟಕ, ಸಂಗೀತ, ನೃತ್ಯ, ಕನ್ನಡದಲ್ಲಿ ಮಾತು ಮತ್ತು ಬರವಣಿಗೆ, ದೇಶೀಯ ಉಡುಪು, ತಿನಿಸುಗಳ ಬಳಕೆ, ಗಡಿಭಾಗದಲ್ಲಿ ಕನ್ನಡ ಜಾಗೃತಿ ಮೂಡಿಸುವುದು, ಕನ್ನಡದಲ್ಲಿ ಮಾತನಾಡುವ ಸ್ಪರ್ದೆ, ಗೀತಗಾಯನ ಮುಂತಾದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಹಾಗೂ ಎಲ್ಲಾ ಅಧಿಕಾರಿ/ ಸಿಬ್ಬಂದಿ ವರ್ಗದವರು ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, "ಕನ್ನಡಕ್ಕಾಗಿ ನಾವು" ಅಭಿಯಾನ ಯಶಸ್ವಿಗೊಳಿಸಲು, ಕೋವಿಡ್ ಮುನ್ನೆಚ್ಚರಿಕೆಗಳೊಂದಿಗೆ ಸಂಪೂರ್ಣ ಸಹಕಾರವನ್ನು ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ದಿನಾಂಕ: 22.10.2021ರ ಪತ್ರದಲ್ಲಿ, ನವಂಬರ್ 1ನೇ ತಾರೀಖು, ರಾಜ್ಯಾದ್ಯಂತ ಕನ್ನಡ ರಾಜ್ಯೋತ್ಸವ ಅಭಿಯಾನವನ್ನು ಆಚರಿಸಲಾಗುತ್ತಿದ್ದು, ಕನ್ನಡಿಗರಾದ ನಾವು ಅನೇಕ ಅನ್ಯಭಾಷೆಗಳ ಪ್ರಭಾವಕ್ಕೊಳಗಾಗಿ ಆ ಭಾಷೆಗಳ ಪದಗಳನ್ನು ಕನ್ನಡದಲ್ಲಿ ಬಳಸುವುದು ಸಹಜವಾಗಿದೆ. ಹಾಗೆಯೇ, ಅನ್ಯ ಭಾಷೆಗಳ ಮಿಡಿತವು ಕನ್ನಡದಲ್ಲಿ ಬೆರೆತಂತೆ, ಅನ್ಯ ಸಂಸ್ಕೃತಿಯು ನಮ್ಮಲ್ಲಿ ಹಾಸುಹೊಕ್ಕಾಗಿದೆ. ಕನ್ನಡದಕ್ಕೆ ತನ್ನದೇ ಆದ ಸಂಪದ್ಭರಿತವಾದ ಸಾಂಸ್ಕೃತಿಕ ಮತ್ತು ಭಾಷಿಕ ಇತಿಹಾಸವಿದೆ. ಇದನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸುತ್ತಾ, ಈ ವರ್ಷ ಕರ್ನಾಟಕ



Scanned with CamScanner

ರಾಜ್ಯೋತ್ಸವವನ್ನು ತಾಲ್ಲೂಕು ಮಟ್ಟ, ಜಿಲ್ಲಾ ಮಟ್ಟ ಮತ್ತು ರಾಜ್ಯ ಮಟ್ಟದಲ್ಲಿ ಈ ಕೆಳಕಂಡ ರೀತಿಯಲ್ಲಿ ವಿಶೇಷವಾಗಿ ಆಚರಿಸಲು ಯೋಜಿಸಲಾಗಿದೆಯೆಂದು ತಿಳಿಸಿರುತ್ತಾರೆ.

- **ನಾಟಕ, ಸಂಗೀತ, ನೃತ್ಯ ಕಾರ್ಯಕ್ರಮಗಳು:** ರಾಜ್ಯಾದ್ಯಂತ ವಿವಿಧ ತಾಲ್ಲೂಕುಗಳಲ್ಲಿ, ಜಿಲ್ಲೆಗಳಲ್ಲಿ ಮತ್ತು ಬೆಂಗಳೂರಿನ ಎಲ್ಲಾ ವಾರ್ಡ್ ಗಳಲ್ಲಿ, ಐಟಿ-ಬಿಟಿ ಕಂಪನಿಗಳಲ್ಲಿ, ಕೆ.ಎಸ್.ಆರ್.ಟಿ.ಸಿ., ಕೆ.ಪಿ.ಟಿ.ಸಿ.ಎಲ್., ಮೆಟ್ರೋ ಮುಂತಾದ ಸಂಸ್ಥೆಗಳಲ್ಲಿ ದಿನಾಂಕ: 24.10.2021 ರಿಂದ 30.10.2021 ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ.

- **ಕನ್ನಡದಲ್ಲಿ ಮಾತು ಮತ್ತು ಬರವಣಿಗೆ:** ನಾವು ಆಡುವ ಮಾತು ಕನ್ನಡದಲ್ಲಿಯೇ ಇರಬೇಕು ಎಂದು ಸಂಕಲ್ಪ ಮಾಡುವುದು. ಸಾಮಾಜಿಕ ಜಾಲತಾಣದಲ್ಲಿ ಕನ್ನಡವನ್ನೇ ಬಳಸುವುದು, ಕನ್ನಡದಲ್ಲೇ ಬರೆಯುವುದು, ಸಹಿ ಮಾಡುವುದು ಹಾಗೂ ಸರಿಗನ್ನಡವನ್ನು ಬಳಸುವ ಅಭ್ಯಾಸ ಮಾಡುವುದು. ಕುಟುಂಬದ ಎಲ್ಲಾ ಸದಸ್ಯರು, ಮಕ್ಕಳು, ಸಂಬಂಧಿಕರು, ಅನಿವಾಸಿ ಕನ್ನಡಿಗರು, ಸುದ್ದಿಮಾಧ್ಯಮದವರು, ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರು ಕನ್ನಡದಲ್ಲೇ ಮಾತನಾಡುವಂತೆ, ತಾವು ಬಳಸುವ ಚರವಾಣಿಯಲ್ಲಿ ಸಂದೇಶಗಳನ್ನು ಕನ್ನಡದಲ್ಲೇ ಮಾತನಾಡುವಂತೆ, ತಾವು ಬಳಸುವ ಚರವಾಣಿಯಲ್ಲಿ ಸಂದೇಶಗಳನ್ನು ಕನ್ನಡದಲ್ಲೇ ಕಳುಹಿಸುವಂತೆ, ಕನ್ನಡದಲ್ಲೇ ಸಹಿ ಮಾಡುವಂತೆ ಪ್ರೇರೇಪಿಸುವುದು.

- **ದೇಶೀಯ ಉಡುಪು, ತಿನಿಸುಗಳ ಬಳಕೆ ಕುರಿತು ಕಾರ್ಯಕ್ರಮ:** ಕನ್ನಡ ಸಂಸ್ಕೃತಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಆಯಾ ಪ್ರದೇಶಗಳ ಸ್ಥಳೀಯ ಉಡುಪು ಹಾಗೂ ತಿನಿಸುಗಳನ್ನು ಪ್ರದರ್ಶಿಸುವುದು.

- **ಗಡಿಭಾಗದಲ್ಲಿ ಕನ್ನಡ ಜಾಗೃತಿ ಕಾರ್ಯಕ್ರಮ:** ರಾಜ್ಯದ ಗಡಿಭಾಗಗಳಾದ ಮಹಾರಷ್ಟ್ರ, ಕೇರಳ, ತಮಿಳುನಾಡು, ಆಂಧ್ರಪ್ರದೇಶ ಮತ್ತು ಗೋವಾ ರಾಜ್ಯಗಳಿಗೆ ಹೊಂದಿಕೊಂಡಿರುವ ಗಡಿಭಾಗದ ತಾಲ್ಲೂಕು ಪ್ರದೇಶಗಳಲ್ಲಿ ನಾಡಿನ ಸಂಸ್ಕೃತಿ, ಭಾಷೆ, ಸಾಹಿತ್ಯ ಕುರಿತಾದ ಜಾಗೃತಿ ಕಾರ್ಯಕ್ರಮಗಳ ಆಯೋಜನೆ.

- **ಕನ್ನಡದಲ್ಲಿ ಮಾತನಾಡುವ ಸ್ಪರ್ದೆ:** ಸುಮಾರು ನಾಲ್ಕೈದು ನಿಮಿಷಗಳ ಕಾಲ ನಿರರ್ಗಳವಾಗಿ ಅನ್ಯಭಾಷೆಯ ಪದಗಳನ್ನು ಬಳಸದೇ ಕೇವಲ ಕನ್ನಡ ಪದಗಳನ್ನೇ ಬಳಸಿ ಮಾತನಾಡುವ ಸ್ಪರ್ಧೆಯನ್ನು ಆಯೋಜಿಸುವುದು. ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆ, ಸಂಸ್ಕೃತಿ, ಹಿರಿಮೆ ಕುರಿತಾದ ಒಂದು ವಿಷಯವನ್ನು ಆರಿಸಿಕೊಂಡು, ಮಾತನಾಡಬೇಕು. ಈಗೆ ಮಾತನಾಡಿದ ದೃಶ್ಯಚಿತ್ರಗಳನ್ನು ಸೆರೆಹಿಡಿದು, ಇಲಾಖೆಗೆ ಕಳುಹಿಸುವುದು. ಇದಕ್ಕಾಗಿ ಅಗತ್ಯ



Scanned with CamScanner

ಮಾಹಿತಿ ಹಾಗೂ ವಿಡಿಯೋ ಸಲ್ಲಿಸಲು https://forms.gle/CRfQAZonSGQh83Sf7 ಕೊಂಡಿಯನ್ನು ಬಳಸುವುದು. ಅಲ್ಲಿರುವ ಸೂಚನೆಗಳನ್ನು ಓದಿ ಸ್ಪರ್ಧಿಗಳ ಮಾಹಿತಿ ಹಾಗೂ ವಿಡಿಯೋಗಳನ್ನು ಇಂದೀಕರಿಸಲು (ಅಪ್ ಲೋಡ್ ಮಾಡಲು) ತಿಳಿಸುವುದು. ಹೀಗೆ ಬಂದ ವಿಡಿಯೋಗಳನ್ನು ಪರಿಶೀಲಿಸಿ, ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮವಾಗಿ ಮಾತನಾಡಿದ ಮೂವರು ಸ್ಪರ್ಧಿಗಳಿಗೆ ಕ್ರಮವಾಗಿ ಪ್ರಥಮ ಬಹುಮಾನ ರೂ.5,000/-, ದ್ವಿತೀಯ ಬಹುಮಾನ ರೂ.3,000/- ಹಾಗೂ ತೃತೀಯ ಬಹುಮಾನ ರೂ.2,000/- ಗಳ ನಗದು ಪುರಸ್ಕಾರಗಳನ್ನು ಮತ್ತು ಪ್ರಮಾಣ ಪತ್ರಗಳನ್ನು ಕೊಡುವ ವ್ಯವಸ್ಥೆಯನ್ನು ಮಾಡಲಾಗುವುದು.

- ಜಿಲ್ಲಾಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದ 31 ಜನ ಹಾಗೂ ಹೊರನಾಡಿನಿಂದ ಪ್ರಥಮ ಬಹುಮಾನ ಪಡೆದ ಒಬ್ಬರು ಒಟ್ಟಾರೆ 32 ಜನ ಸ್ಪರ್ಧಿಗಳಿಗೆ ರಾಜ್ಯ ಮಟ್ಟದ ಸ್ಪರ್ಧೆಯನ್ನು ನಡೆಸಿ, ಅವರಲ್ಲಿ ಅತ್ಯುತ್ತಮವಾಗಿ ಮಾತನಾಡಿದ ಮೊದಲ ಮೂರು ಸ್ಪರ್ಧಿಗಳನ್ನು ಆಯ್ಕೆಮಾಡಿ, ಅವರಿಗೆ ಕ್ರಮವಾಗಿ ಪ್ರಥಮ ಬಹುಮಾನ ರೂ.50,000/-, ದ್ವಿತೀಯ ಬಹುಮಾನ ರೂ.30,000/- ಹಾಗೂ ತೃತೀಯ ಬಹುಮಾನ ರೂ.20,000/- ಗಳ ನಗದು ಪುರಸ್ಕಾರಗಳನ್ನು ಮತ್ತು ಪ್ರಮಾಣ ಪತ್ರಗಳನ್ನು ಕೊಡುವ ವ್ಯವಸ್ಥೆಯನ್ನು ಮಾಡಲಾಗುವುದು.

- **ಸಾಮೂಹಿಕ ಕನ್ನಡ ಗೀತಗಾಯನ – ಅಕ್ಟೋಬರ್ 28, ಗುರುವಾರ:** ಕನ್ನಡದ ಶ್ರೇಷ್ಠತೆಯನ್ನು ಸಾರುವ ಡಾ. ಕುವೆಂಪುರವರ "ಬಾರಿಸು ಕನ್ನಡ ಡಿಂಡಿಮವ", ಡಾ. ಕೆ.ಎಸ್. ನಿಸಾರ್ ಅಹಮದ್ ರವರ "ಜೋಗದ ಸಿರಿ ಬೆಳಕಿನಲ್ಲಿ" ಹಾಗೂ ಹಂಸಲೇಖ ರವರ "ಹುಟ್ಟಿದರೆ ಕನ್ನಡ ನಾಡಿನಲ್ಲಿ ಹುಟ್ಟಬೇಕು" ಈ ಗೀತೆಗಳನ್ನು ದಿನಾಂಕ: 28.10.2021 ರಂದು ಬೆಳಿಗ್ಗೆ 11.00 ಗಂಟೆಗೆ ರಾಜ್ಯಾದ್ಯಂತ ಏಕಕಾಲದಲ್ಲಿ ಹಾಡುವುದು. ಸಾಮೂಹಿಕ ಗೀತ ಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಲು

ಮೇಲ್ಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕಾಗಿರುವುದರಿಂದ, ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು/ ಪದವಿ ಕಾಲೇಜು/ ವಿಶ್ವವಿದ್ಯಾಲಯಗಳ ಆವರಣದಲ್ಲಿ ಗೀತ ಗಾಯನ ಕಾರ್ಯಕ್ರಮ ಆಯೋಜಿಸಿ ಎಲ್ಲಾ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಸದರಿ ಗೀತ ಗಾಯನ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅನುವಾಗುವಂತೆ ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಅದರಂತೆ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ/ ಅನುದಾನಿತ / ಖಾಸಗಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು / ಪದವಿ



Scanned with CamScanner

ಕಾಲೇಜು / ವಿಶ್ವವಿದ್ಯಾಲಯಗಳ ಆವರಣದಲ್ಲಿ ಗೀತಗಾಯನ ಕಾರ್ಯಕ್ರಮಗಳನ್ನು ಆಯೋಜಿಸಿ, ಎಲ್ಲಾ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 112 ವಿವಿಧ 2021,**
**ಬೆಂಗಳೂರು, ದಿನಾಂಕ: 26-10-2021**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021ನೇ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಸಂಬಂಧ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು / ಪದವಿ ಕಾಲೇಜು / ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕನ್ನಡದ ಶ್ರೇಷ್ಠತೆಯನ್ನು ಸಾರುವ ಡಾ. ಕುವೆಂಪುರವರ "ಬಾರಿಸು ಕನ್ನಡ ಡಿಂಡಿಮವ", ಡಾ. ಕೆ.ಎಸ್. ನಿಸಾರ್ ಅಹಮದ್ ರವರ "ಜೋಗದ ಸಿರಿ ಬೆಳಕಿನಲ್ಲಿ" ಹಾಗೂ ಹಂಸಲೇಖ ರವರ "ಹುಟ್ಟಿದರೆ ಕನ್ನಡ ನಾಡಿನಲ್ಲಿ ಹುಟ್ಟಬೇಕು" ಈ ಗೀತೆಗಳನ್ನು ಅಕ್ಟೋಬರ್ 28ನೇ ತಾರೀಖು, ಗುರುವಾರ ಸಾಮೂಹಿಕ ಗೀತ ಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಲು ಆದೇಶಿಸಿದೆ. ಕಾರ್ಯಕ್ರಮದ ರೂಪುರೇಷೆಗಳನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಮಹೇಶ್ ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

**ಇವರಿಗೆ:-**

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
2. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ / ಖಾಸಗಿ ವಿಶ್ವವಿದ್ಯಾಲಯಗಳು.
3. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
4. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.



Scanned with CamScanner

5. ಪ್ರಾಂಶುಪಾಲರು, ಎಲ್ಲಾ ಸರ್ಕಾರಿ/ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು/ ಪದವಿ ಕಾಲೇಜು – ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಮೂಲಕ ತಿಳಿಸುವುದು.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ.
8. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯಗಳು), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿಗಳು (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಗಳು (ಯೋಜನೆ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
11. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

<u>**ಪ್ರತಿ ಮಾಹಿತಿಗಾಗಿ –**</u>

1. ಸರ್ಕಾರದ ಮುಖ್ಯಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

Scanned with CamScanner

<u>ಅನುಬಂಧ</u>

<u>ದಿನಾಂಕ: 28.10.2021 ರಂದು ಬೆಳಗ್ಗೆ: 11.00 ಗಂಟೆಗೆ ಗೀತಗಾಯನ ಕಾರ್ಯಕ್ರಮ ಪಟ್ಟಿ</u>

| ಕ್ರ. ಸಂ. | ಕಾರ್ಯಕ್ರಮಗಳು | ಅವಧಿ |
|---|---|---|
| 1 | ಸ್ವಾಗತ | 2.00 ನಿಮಿಷ |
| 2 | ಕಾರ್ಯಕ್ರಮದ ಉದ್ದೇಶ ಕುರಿತು ಪ್ರಾಸ್ತಾವಿಕ ನುಡಿಗಳು | 4.00 ನಿಮಿಷ |
| 3 | ಕನ್ನಡ ಬಳಕೆ – ಪ್ರತಿಜ್ಞಾವಿಧಿ | 2.00 ನಿಮಿಷ |
| 4 | ಮೂರು ಹಾಡುಗಳನ್ನು ಇಲಾಖೆಯಿಂದ ಕಳುಹಿಸಲಾಗಿರುವ ಲಿಂಕ್ https://docs.google.com/forms/d/e/1FAIpQLScoF5pS1bI0OmxNDjm0cxLz65gTTs_mKtUw-I49Ij46A/viewform?vc=0&c=0&w=1&flr=0 ಅನ್ನು ಬಳಸಿ ಒಟ್ಟಾಗಿ ಹಾಡುವುದು, ರೆಕಾರ್ಡ್ ಮಾಡುವುದು ಹಾಗೂ ಅಪ್ ಲೋಡ್ ಮಾಡುವುದು. | 15.00 ನಿಮಿಷ |
| 5 | ವಂದನಾರ್ಪಣೆ | 2.00 ನಿಮಿಷ |

Scanned with CamScanner